## ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು.

## ಎಸ್.ಸಿ ಸಂಖ್ಯೆ– 338/2022

| | | |
|---|---|---|
| **ಸಾಕ್ಷಿದಾರನ ಹೆಸರು** | : ಮೆಹಬೂಬ್ ಪಾಷ | **ಪಿ.ಡಬ್ಲ್ಯೂ– 5** |
| **ತಂದೆಯ ಹೆಸರು** | : ಅಬ್ದುಲ್ ಶುಕೂರ್ | **ಸಿ.ಡಬ್ಲ್ಯೂ– 4** |
| **ವಯಸ್ಸು** | : 36 ವರ್ಷ | |
| **ಉದ್ಯೋಗ** | : ಆಟೋ ಚಾಲಕ | |
| **ವಾಸಸ್ಥಳ** | : ಜೆ.ಸಿ ನಗರ, ಮೈಸೂರು. | |

**ಸಾಕ್ಷಿಯನ್ನು ಈ ದಿನ ದಿಃ05.03.2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

**1.** ನಾನು ಸಹಿ ಮಾಡುತ್ತೇನೆ. ಸಾಕ್ಷಿ ತನ್ನ ಸಹಿ ಇರುವ ದಾಖಲೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆ ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಶಾನೆ ಪಿ–2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಶಾನೆ ಪಿ–2(ಸಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ಸಹಿಯನ್ನು ನಾನು ಜೆ.ಸಿ ನಗರದಲ್ಲಿ ನನ್ನ ಅಣ್ಣ ಫೈರೋಜ್ ಮನೆಯ ಬಳಿ ಸಹಿ ಹಾಕಿರುತ್ತೇನೆ. ಪೊಲೀಸರು ಸಹಿ ಮಾಡಲು ಕೇಳಿದ್ದು, ಸಹಿ ಹಾಕಿರುತ್ತೇನೆ. ಪೊಲೀಸರು ಸದರಿ ಸ್ಥಳಕ್ಕೆ ನನ್ನ ಅಣ್ಣ ಮತ್ತು ರಮೇಶನ ನಡುವೆ ಗಲಾಟೆ ಆದ ವಿಚಾರಕ್ಕೆ ಅಲ್ಲಿ ಬಂದಿದ್ದು, ನನ್ನ ಸಹಿಯನ್ನು ಪಡೆದಿರುತ್ತಾರೆ.

**2.** ಪೊಲೀಸರು ಸ್ಥಳದಲ್ಲಿ ಏನು ಮಾಡಿದರು ಎಂದು ನನಗೆ ನೆನಪಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಪೊಲೀಸರು ಪಡೆದುಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಕೋರಿದ್ದು, ಸದರಿಯವರ ಕೋರಿಕೆಯನ್ನು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಿದೆ.)

**ಪಾಟೀ ಸವಾಲುಃ- ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

**3.** ದಿಃ– **11.04.2021** ರಂದು ಪೊಲೀಸರು ನನ್ನ ಅಣ್ಣ ಪೈರೋಜ್ ಖಾನ್ ರವರ ಮನೆಯ ಬಳಿ ಬಂದು ಮದ್ಯಾಹ್ನ **2.30** ಗಂಟೆಯಿಂದ **3.15** ರವರೆಗೆ ಸ್ಥಳದಲ್ಲಿ ಪರಿಶೀಲನೆ ಮಾಡಿದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ಸಮಯದಲ್ಲಿ ಚಾ.ಸಾಃ1 ರವರು ಒಂದು ಸೆಂಟ್ರಿಗ್ ಗೆ ಉಪಯೋಗಿಸುವ ಮರದ ದೊಣ್ಣೆಯನ್ನು ಅವರ ಗಂಡನಿಗೆ ಹಲ್ಲೆ ಮಾಡಲು ಉಪಯೋಗಿಸಿದ ದೊಣ್ಣೆ ಎಂದು ಪೊಲೀಸರು ಹಾಜರುಪಡಿಸಿದರು ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ಸಮಕ್ಷಮ ಸದರಿ ದೊಣ್ಣೆಯನ್ನು ಪೊಲೀಸರು ಅಮಾನತ್ತುಪಡಿಸಿಕೊಂಡು ಮಹಜರ್ ಜರುಗಿಸಿ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮಹಜರಿನ ವಿಚಾರಗಳನ್ನು ತಿಳಿದುಕೊಂಡು ನಾನು ದಾಖಲೆಗೆ ಸಹಿ ಹಾಕಿರುತ್ತೇನೆ , ಈಗ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ–**

**4.** ನಾನು ನನ್ನ ಅಣ್ಣನ ಜೊತೆ ಠಾಣೆಗೆ ಹೋದಾಗ ಸದರಿ ದಾಖಲೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿರುವುದಿಲ್ಲ ಎಂದರೆ ಸರಿ.

<u>ಮರುವಿಚಾರಣೆಃ– ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೇ ಸ ಇ ಎ ಒ**

**Sd/-**

**3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಮೈಸೂರು.**